ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

13

ಶಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 19/3/2021

ವಿಧಾನಸಭೆ ಉಪಚುನಾವಣೆ

# ವಲಸಿಗರಿಗೆ ಕಾಂಗ್ರೆಸ್, ಜೆಡಿಎಸ್ ಮಣೆ

ಪ್ರಜಾವಾಣಿ ವಾರ್ತೆ 19-3-21

ನವದೆಹಲಿ/ಬೆಂಗಳೂರು: ಆಡಳಿತ ಪಕ್ಷ ಬಿಜೆಪಿ ಅಭ್ಯರ್ಥಿ ಘೋಷಿಸುವ ಮೊದಲೇ ಮೂರು ವಿಧಾನಸಭೆ ಕ್ಷೇತ್ರಗಳಿಗೆ ಕಾಂಗ್ರೆಸ್, ಒಂದು ಕ್ಷೇತ್ರಕ್ಕೆ ಜೆಡಿಎಸ್ ಅಭ್ಯರ್ಥಿಗಳ ಹೆಸರು ಘೋಷಿಸುವ ಮೂಲಕ ಉಪಚುನಾವಣೆಯ ಅಖಾಡಕ್ಕೆ ಧುಮುಕಿವೆ.

ಮಸ್ಕಿ ಮತ್ತು ಸಿಂದಗಿ ಕ್ಷೇತ್ರದಲ್ಲಿ ಕ್ರಮವಾಗಿ ಬಿಜೆಪಿ, ಜೆಡಿಎಸ್‌ನಿಂದ ವಲಸೆ ಬಂದ ಅಭ್ಯರ್ಥಿಗಳಿಗೆ ಕಾಂಗ್ರೆಸ್ ಟಿಕೆಟ್ ನೀಡಿದ್ದರೆ, 15 ವರ್ಷಗಳಿಂದ ಕಾಂಗ್ರೆಸ್‌ನಲ್ಲಿದ್ದು ಗುರುವಾರವಷ್ಟೇ ಪಕ್ಷ ಸೇರಿದ್ದವರಿಗೆ ಜೆಡಿಎಸ್ ಟಿಕೆಟ್ ಕೊಟ್ಟಿದೆ.

ಚುನಾವಣೆ ದಿನಾಂಕ ಪ್ರಕಟವಾದ ಕೂಡಲೇ ಅಭ್ಯರ್ಥಿ ಪಟ್ಟಿ ಘೋಷಿಸಿ, ಆರಂಭದಿಂದಲೇ ಸಿದ್ಧತೆ



ಬಸನಗೌಡ ತುರ್ವಿಹಾಳ



ಮಲ್ಲಮ್ಮ ನಾರಾಯಣರಾವ್



ಅಶೋಕ ಮನಗೂಳಿ



ಯಸ್ರಬ್ ಅಲಿ

ನಡೆಸುವ ಕೆಲಸವನ್ನು ಸಾಮಾನ್ಯವಾಗಿ ಬಿಜೆಪಿ ಮಾಡುತ್ತಿತ್ತು. ಈಗ, ಕಾಂಗ್ರೆಸ್ ಈ ಕೆಲಸ ಮಾಡಿದೆ.

8ನೇ ಪುಟ ನೋಡಿ

# ವಲಸಿಗರಿಗೆ ಕಾಂಗ್ರೆಸ್, ಜೆಡಿಎಸ್ ಮಣೆ

ಒಂದನೇ ಪುಟದಿಂದ

ಬಿಜೆಪಿ ರಾಜ್ಯ ಉಸ್ತುವಾರಿ ಅರುಣ್ ಸಿಂಗ್, ಶನಿವಾರ ಬೆಂಗಳೂರಿಗೆ ಬರಲಿದ್ದು, ಆ ಬಳಿಕ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಗೆ ಚಾಲನೆ ಸಿಗಲಿದೆ.

ಬಸವಕಲ್ಯಾಣ ಕ್ಷೇತ್ರದಲ್ಲಿ ಶಾಸಕರಾಗಿದ್ದ ದಿವಂಗತ ನಾರಾಯಣರಾವ್ ಅವರ ಪತ್ನಿ ಮಲ್ಲಮ್ಮ ಅವರಿಗೆ ಟಿಕೆಟ್ ನೀಡಲಾಗಿದೆ. ಇತ್ತೀಚೆಗಷ್ಟೇ ಬಿಜೆಪಿ ತೊರೆದು ಪಕ್ಷ ಸೇರಿದ್ದ ಬಸವನಗೌಡ ತುರವೀಹಾಳ ಅವರನ್ನು ಮಸ್ಕಿ ಕ್ಷೇತ್ರದ ಅಭ್ಯರ್ಥಿಯನ್ನಾಗಿ ಘೋಷಿಸಲಾಗಿದೆ.

2018ರಲ್ಲಿ ನಡೆದಿದ್ದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರತಾಪಗೌಡ ಪಾಟೀಲ (ಇವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿ ಸೇರ್ಪಡೆಯಾಗಿದ್ದಾರೆ) ವಿರುದ್ಧ ಬಿಜೆಪಿಯಿಂದ ಸ್ಪರ್ಧಿಸಿದ್ದ ಬಸವನಗೌಡ ಅಲ್ಪ ಮತಗಳ ಅಂತರದಿಂದ ಸೋಲನುಭವಿಸಿದ್ದರು.

ಬಸವಕಲ್ಯಾಣ ಮತ್ತು ಮಸ್ಕಿ ಕ್ಷೇತ್ರದ ಉಪಚುನಾವಣೆಗೆ ಏಪ್ರಿಲ್ 17ರಂದು ಮತದಾನ ನಡೆಯಲಿದೆ. ಚುನಾವಣೆ ದಿನಾಂಕ ಘೋಷಣೆಯಾಗದ ಸಿಂದಗಿ ಕ್ಷೇತ್ರಕ್ಕೂ ಕಾಂಗ್ರೆಸ್ ಅಭ್ಯರ್ಥಿಯನ್ನು ಘೋಷಿಸಿದೆ. ಎಂ.ಸಿ. ಮನಗೂಳಿ ಅವರು ಕಣಕ್ಕಿಳಿಯಲಿದ್ದಾರೆ.

**ಜೆಡಿಎಸ್‌ನಿಂದ ಖಾದ್ರಿ:** ಬಸವ ಕಲ್ಯಾಣ ಕ್ಷೇತ್ರದ ಅಭ್ಯರ್ಥಿಯಾಗಿ ಸೈಯದ್ ಯಸ್ರಬ್ ಅಲಿ ಖಾದ್ರಿ ಅವರನ್ನು ಕಣಕ್ಕೆ ಇಳಿಸುವುದಾಗಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

‘ಉಪಚುನಾವಣೆಯನ್ನು ನಾವು ಲಘುವಾಗಿ ಪರಿಗಣಿಸಿಲ್ಲ. ಮೂರು ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತೇವೆ’ ಎಂದು ಹೇಳಿದರು.

‘ಮುಸ್ಲಿಂ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿದ ಕೂಡಲೇ, ಬಿಜೆಪಿಗೆ ಅನುಕೂಲವಾಗುವಂತೆ ಜೆಡಿಎಸ್ ನಡೆದುಕೊಂಡಿದೆ ಎಂದು ಕಾಂಗ್ರೆಸ್ ನಾಯಕರು ನಾಳೆಯಿಂದಲೇ ಟೀಕೆ ಆರಂಭಿಸುತ್ತಾರೆ. ಎರಡೂ ರಾಷ್ಟ್ರೀಯ ಪಕ್ಷಗಳ ಜತೆಗೂ ಸಮಾನ ಅಂತರ ಕಾಯ್ದುಕೊಂಡು ಗೆಲ್ಲಲೇಬೇಕೆಂದು ಕೊನೆಯವರೆಗೂ ಪ್ರಯತ್ನ ಮಾಡುತ್ತೇವೆ’ ಎಂದೂ ಅವರು ಹೇಳಿದರು.

## ಉಪಚುನಾವಣೆ: ‘ಕೈ’ ನಾಯಕರ ಸಭೆ 20ರಂದು

ಬೆಂಗಳೂರು: ಬೆಳಗಾವಿ ಲೋಕಸಭಾ ಕ್ಷೇತ್ರ ಮತ್ತು ಬಸವ ಕಲ್ಯಾಣ, ಮಸ್ಕಿ ವಿಧಾನಸಭೆ ಕ್ಷೇತ್ರಗಳಿಗೆ ನಡೆಯಲಿರುವ ಉಪಚುನಾವಣೆ ಕುರಿತು ಚರ್ಚಿಸಲು ಕಾಂಗ್ರೆಸ್ ಹಿರಿಯ ಮುಖಂಡರ ಸಭೆ ಶನಿವಾರ (ಮಾರ್ಚ್ 20) ಬೆಳಿಗ್ಗೆ 11 ಗಂಟೆಗೆ ಕೆಪಿಸಿಸಿ ಕಚೇರಿಯಲ್ಲಿ ನಡೆಯಲಿದೆ.

ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ, ರಾಜ್ಯಸಭೆ ಸದಸ್ಯ ಮಲ್ಲಿಕಾರ್ಜುನ ಖರ್ಗೆ, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಎಸ್.ಆರ್. ಪಾಟೀಲ, ಕೆಪಿಸಿಸಿ ಕಾರ್ಯಾಧ್ಯಕ್ಷರು ಮತ್ತು ಎಐಸಿಸಿ ವೀಕ್ಷಕರು ಭಾಗವಹಿಸಲಿದ್ದಾರೆ.

‘ಉಪ ಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ಉಸ್ತುವಾರಿ ವಹಿಸಿರುವ ಪಕ್ಷದ ಮುಖಂಡರು, ಮಾಜಿ ಸಚಿವರು, ಶಾಸಕರು, ಸಂಸದರನ್ನು ಸಭೆಗೆ ಆಹ್ವಾನಿಸಲಾಗಿದೆ’ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.